KAUK620015742026

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹೊನ್ನಾವರ.**

**-:ಉಪಸ್ಥಿತರು:-**

**ಶ್ರೀ ನವೀನ್ ಕೋಪರ್ಡೆ.,**

**ಬಿ.ಎ.,ಎಲ್.ಎಲ್.ಬಿ.,**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ**

**ಪ್ರ.ದ.ನ್ಯಾ ದಂಡಾಧಿಕಾರಿ, ಹೊನ್ನಾವರ.**

**ದಿನಾಂಕ 25 ನೇ ಜುಲೈ ಮಾಹೆಯ 2026 ನೇ ಇಸವಿ**

**ಕ್ರಿಮಿನಲ್ ಮಿಸಲೇನಿಯಸ್ ಸಂಖ್ಯೆ 194/2026**

**ಅರ್ಜಿದಾರರುಃ-** **ಜಸಿಂತಾ ಲೋರೆನ್ಸ ಪಿಂಟೊ,**
**W/o ಡೊಮಿನಿಕ ಪಿಂಟೊ,**
ವಯಸ್ಸು ಸುಮಾರು 56 ವರ್ಷ,
ಉದ್ಯೋಗಃ ಮನೆವಾರ್ತೆ,
ಸಾಕೀನಃ- 2254 ಎ, ಜನತಾಕಾಲೋನಿ, ಮಂಕಿ,
ತಾಃ ಹೊನ್ನಾವರ, (ಉ.ಕ).
**(ಅರ್ಜಿದಾರರ ಪರವಾಗಿ ಶ್ರೀ ಕೆ.ಆರ್.ಎನ್, ವಕೀಲರು.)**

**-ವಿರುದ್ಧ-**

**ಎದುರುದಾರರುಃ-** **ಮುಖ್ಯಾಧಿಕಾರಿಗಳು,**
ಜನನ-ಮರಣ ನೋಂದಣಾಧಿಕಾರಿಗಳು,
ಪಟ್ಟಣ ಪಂಚಾಯತ, ಮಂಕಿ,
ತಾಲೂಕುಃ- ಹೊನ್ನಾವರ, (ಉ.ಕ).

**(ಎದುರುದಾರರು ಏಕಪಕ್ಷೀಯ)**

****

–: **ಆದೇಶ** :–

ಅರ್ಜಿದಾರರು, ಸದರಿ ಅರ್ಜಿಯನ್ನು ಜನನ ಮತ್ತು ಮರಣ ನೋಂದಣಿ ಕಾಯ್ದೆ– 1969 ರ ಕಲಂ.13(3) ರಡಿಯಲ್ಲಿ ಸಲ್ಲಿಸಿದ್ದು ಇರುತ್ತದೆ.

ಅರ್ಜಿದಾರರಾದ **ಜಸಿಂತಾ ಲೋರೆನ್ಸ ಪಿಂಟೊರವರು ದಿನಾಂಕ 17–08–1968 ರಂದು ಜನತಾಕಾಲೋನಿ, ಮಂಕಿ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿರುವ ಅವರ ಸ್ವಂತ ಮನೆಯಲ್ಲಿ** ಜನಿಸಿರುವ ಬಗ್ಗೆ ಎದುರುದಾರರು ತಮ್ಮ ಜನನ ಮತ್ತು ಮರಣ ನೋಂದಣಿ ರಿಜಿಸ್ಟರ್ ನಲ್ಲಿ ಅರ್ಜಿದಾರರ ಜನನ ದಿನಾಂಕವನ್ನು ನೋಂದಾಯಿಸಿಕೊಂಡು ಜನನ ದೃಢೀಕರಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ಆದೇಶಿಸಬೇಕೆಂದು ಪ್ರಾರ್ಥನೆ ಸಲ್ಲಿಸಿರುತ್ತಾರೆ.

2. **ಅರ್ಜಿದಾರರ ಅರ್ಜಿಯ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತೆ ಇರುತ್ತದೆ:–**

ಅರ್ಜಿಯಲ್ಲಿ ಹೇಳಿರುವಂತೆ, ಅರ್ಜಿದಾರರಾದ **ಜಸಿಂತಾ ಲೋರೆನ್ಸ ಪಿಂಟೊರವರು ದಿನಾಂಕ 17–08–1968 ರಂದು ಜನತಾಕಾಲೋನಿ, ಮಂಕಿ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿರುವ ಅವರ ಸ್ವಂತ ಮನೆಯಲ್ಲಿ** ಜನಿಸಿರುತ್ತಾರೆ. ಮುಂದುವರೆದು, ಅರ್ಜಿದಾರರಿಗಾಗಲೀ ಅಥವಾ ಅವರ ಪಾಲಕರಿಗಾಗಲೀ ಮತ್ತು ಸಂಬಂಧಪಟ್ಟವರಿಗೆ ಕಾನೂನಿನ ತಿಳುವಳಿಕೆ ಇಲ್ಲದೇ ಇರುವುದರಿಂದ ಅರ್ಜಿದಾರರ ಜನನ ದಿನಾಂಕವನ್ನು ಸಂಬಂಧಪಟ್ಟ ಜನನ ಮತ್ತು ಮರಣ ನೋಂದಣಿ ಕಛೇರಿಯಲ್ಲಿ ನೋಂದಣಿ ಮಾಡಿಸಿದ್ದು ಇರುವುದಿಲ್ಲ. ಆದರೆ, ಈಗ ಅರ್ಜಿದಾರರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆಯುವ ಸಲುವಾಗಿ ಜನನ ಪ್ರಮಾಣ ಪತ್ರವನ್ನು ಪಡೆಯುವುದು ತೀರಾ ಅವಶ್ಯಕತೆ ಇರುತ್ತದೆ. ಆದ್ದರಿಂದ ಸದ್ರಿ ಅರ್ಜಿದಾರರ ಜನನ ಪ್ರಮಾಣ ಪತ್ರದ ದಾಖಲೆಯನ್ನು ಪೂರೈಸುವಂತೆ ಎದುರುದಾರರ ಕಛೇರಿಯಲ್ಲಿ ಅರ್ಜಿ ಸಲ್ಲಿಸಿದಾಗ, ಅರ್ಜಿದಾರರ ಜನನ ದಿನಾಂಕವು ಸಂಬಂಧಪಟ್ಟ, ದಾಖಲೆಗಳಲ್ಲಿ ನೋಂದಣಿಯಾಗಿರುವುದಿಲ್ಲವೆಂದು ಎದುರುದಾರರು ದಿನಾಂಕ:30–05–2026

ರಂದು ಅಲಭ್ಯ ಪ್ರಮಾಣ ಪತ್ರವನ್ನು ನೀಡಿರುತ್ತಾರೆ. ಆದ್ದರಿಂದ, ಅರ್ಜಿಯಲ್ಲಿ ಕೇಳಿರುವಂತೆ ಆದೇಶವನ್ನು ಮಾಡಬೇಕೆಂದು ಪ್ರಾರ್ಥಿಸಿರುತ್ತಾರೆ.

3. ನಂತರ ಮಾನ್ಯ ನ್ಯಾಯಾಲಯವು ಎದುರುದಾರರಿಗೆ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ಎದುರುದಾರರಿಗೆ ಜಾರಿಯಾಗಿದ್ದರೂ ಸಹ ಎದುರುದಾರರು ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ ತಕರಾರನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ, ಎದುರುದಾರರನ್ನು ಏಕ–ಪಕ್ಷೀಯ ಸ್ಥಾನದಲ್ಲಿ ಇರಿಸಲಾಯಿತು.

4. ಅರ್ಜಿದಾರರು ಅರ್ಜಿಯಲ್ಲಿ ಪ್ರತಿಪಾದಿಸಿದ ಸಂಗತಿಗಳನ್ನು ಪುಷ್ಠೀಕರಿಸುವ ಸಲುವಾಗಿ ಪಿ.ಡಬ್ಲ್ಯೂ–1 ಎಂದು ವಿಚಾರಣೆಗೆ ಒಳಪಟ್ಟಿದ್ದು, ಮುಖ್ಯ ವಿಚಾರಣೆಯ ಬದಲಾಗಿ ಸಾಕ್ಷ್ಯ ಪ್ರಮಾಣಪತ್ರವನ್ನು ಸಲ್ಲಿಸಿ ಅರ್ಜಿಯಲ್ಲಿ ಹೇಳಿದ ಸಂಗತಿಗಳನ್ನೇ ಪುನರುಚ್ಚರಿಸಿರುತ್ತಾರೆ ಹಾಗೂ ನಿಪಿ–1 ರಿಂದ ನಿಪಿ–4 ರ ದಾಖಲೆಗಳನ್ನು ನಿಶಾನೆಗೊಳಿಸಿರುತ್ತಾರೆ.

5. ಅರ್ಜಿದಾರರ ಪರ ವಕೀಲರ ವಾದವನ್ನು ಆಲಿಸಲಾಯಿತು, ದಾಖಲೆಗಳನ್ನು ಪರಿಶೀಲಿಸಲಾಯಿತು.

6. ಈ ನ್ಯಾಯಾಲಯವು ಈ ಕೆಳಗಿನ ಅಂಶಗಳನ್ನು ನಿರ್ಧರಿಸುತ್ತದೆ.

1. ಅರ್ಜಿದಾರರು ತಮ್ಮ ಅರ್ಜಿಯಲ್ಲಿ ಕೇಳಿರುವಂತಹ ಪರಿಹಾರ ಪಡೆಯಲು ಅರ್ಹರೇ?
2. ಮಾಡುವ ಆದೇಶ ಏನು?

7. ಈ ಮೇಲಿನ ಅಂಶಗಳಿಗೆ ಈ ಕೆಳಗಿನಂತೆ ಉತ್ತರಿಸಲಾಗಿದೆ.

**ಅಂಶ ಸಂಖ್ಯೆ** 1 : – ಸಕಾರಾತ್ಮಕವಾಗಿ
**ಅಂಶ ಸಂಖ್ಯೆ** 2 : – ಅಂತಿಮ ಆದೇಶದಂತೆ,

ಈ ಕೆಳಗೆ ವಿವರಿಸಿರುವ ಕಾರಣಗಳಿಗಾಗಿ,

* * * *

-: **<u>ಕಾರಣಗಳು</u>** :-

8. **<u>ಅಂಶ ಸಂಖ್ಯೆ 1</u>**:- ಪ್ರಸ್ತುತ ಅರ್ಜಿಯಲ್ಲಿ ಪ್ರತಿಪಾದಿಸಿದ ಸಂಗತಿಗಳನ್ನು ಪುಷ್ಟೀಕರಿಸುವ ಸಲುವಾಗಿ ಅರ್ಜಿದಾರರು ಪಿ.ಡಬ್ಲ್ಯೂ-1 ಎಂದು ವಿಚಾರಣೆಗೆ ಒಳಪಟ್ಟಿದ್ದು, ಮುಖ್ಯ ವಿಚಾರಣೆಯ ಬದಲಾಗಿ ಸಾಕ್ಷ್ಯ ಪ್ರಮಾಣಪತ್ರವನ್ನು ಸಲ್ಲಿಸಿ ಅರ್ಜಿಯಲ್ಲಿ ಹೇಳಿದ ಸಂಗತಿಗಳನ್ನೇ ಪುನರುಚ್ಚರಿಸಿರುತ್ತಾರೆ ಹಾಗೂ ನಿಪಿ-1 ರಿಂದ ನಿಪಿ-4 ದಾಖಲೆಗಳನ್ನು ನಿಶಾನೆಯಾಗಿ ತಮ್ಮ ಪರವಾಗಿ ಗುರುತಿಸಿಕೊಂಡಿರುತ್ತಾರೆ. ಅಲಭ್ಯ ಪ್ರಮಾಣ ಪತ್ರವನ್ನು ನಿಪಿ-1 ಎಂದು, ಅರ್ಜಿದಾರರ ಆಧಾರ ಕಾರ್ಡ್ ನ ನೋಟರೈಸ್ಡ್ ಪ್ರತಿಯನ್ನು ನಿಪಿ-2 ಎಂದು, ಅರ್ಜಿದಾರರ ಶಾಲಾ ಧೃಡೀಕರಣ ಪತ್ರದ ನೋಟರೈಸ್ಡ್ ಪ್ರತಿಯನ್ನು ನಿಪಿ-3 ಎಂದು, ಜನನ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ನಿಪಿ-4 ಎಂದು ಗುರುತಿಸಿರುತ್ತಾರೆ.

ಮುಂದುವರೆದು, ಅರ್ಜಿದಾರರಾದ **ಜಸಿಂತಾ ಲೋರೆನ್ಸ ಪಿಂಟೋರವರು ದಿನಾಂಕ 17-08-1968 ರಂದು ಜನತಾಕಾಲೋನಿ, ಮಂಕಿ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿರುವ ಅವರ ಸ್ವಂತ ಮನೆಯಲ್ಲಿ** ಜನಿಸಿರುತ್ತಾರೆ. ಮುಂದುವರೆದು, ಅರ್ಜಿದಾರರಿಗಾಗಲೀ ಅಥವಾ ಅವರ ಪಾಲಕರಿಗಾಗಲೀ ಮತ್ತು ಸಂಬಂದಪಟ್ಟವರಿಗೆ ಕಾನೂನಿನ ತಿಳುವಳಿಕೆ ಇಲ್ಲದೇ ಇರುವುದರಿಂದ ಅರ್ಜಿದಾರರ ಜನನ ದಿನಾಂಕವನ್ನು ಸಂಬಂಧಪಟ್ಟ ಜನನ ಮತ್ತು ಮರಣ ನೋಂದಣಿ ಕಛೇರಿಯಲ್ಲಿ ನೋಂದಣಿ ಮಾಡಿಸಿದ್ದು ಇರುವುದಿಲ್ಲ. ಆದರೆ, ಈಗ ಅರ್ಜಿದಾರರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆಯುವ ಸಲುವಾಗಿ ಜನನ ಪ್ರಮಾಣ ಪತ್ರವನ್ನು ಪಡೆಯುವುದು ತೀರಾ ಅವಶ್ಯಕತೆ ಇದೆ ಎಂಬುದಾಗಿ ಸಾಕ್ಷ್ಯ ನುಡಿದಿರುತ್ತಾರೆ. ಪಿ.ಡಬ್ಲ್ಯೂ-1 ರವರು, ಸಂಬಂಧಪಟ್ಟ ಜನನ ಮತ್ತು ಮರಣ ನೋಂದಣಿ ಅಧಿಕಾರಿಗಳು ದಿನಾಂಕ 30-05-2026 ರಂದು ನೀಡಿರುವ ಅಲಭ್ಯ ಪ್ರಮಾಣ ಪತ್ರವನ್ನು ನಿಪಿ-1 ಎಂದು, ಅರ್ಜಿದಾರರ ಆಧಾರ ಕಾರ್ಡ್ ನ ನೋಟರೈಸ್ಡ್ ಪ್ರತಿಯನ್ನು ನಿಪಿ-2

ಎಂದು, ಅರ್ಜಿದಾರರ ಶಾಲಾ ಧೃಡೀಕರಣ ಪತ್ರದ ನೋಟರೈಸ್ಡ್ ಪ್ರತಿಯನ್ನು ನಿಪಿ–3 ಎಂದು, ಅರ್ಜಿದಾರರ ಹೋಲಿ ಕ್ರಾಸ್ ಮಂಕಿ ಚರ್ಚ್ ನವರು ನೀಡಿದ ಜನನ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ನಿಪಿ–4 ಎಂದು ಗುರುತಿಸಿರುತ್ತಾರೆ. ಸದರಿ ದಾಖಲಾತಿಗಳನ್ನು ಪರಿಶೀಲಿಸಿ ನೋಡಿದಾಗ, ಅರ್ಜಿದಾರರ ಜನನ ದಿನಾಂಕವು ಜನನ ಮತ್ತು ಮರಣ ರಿಜಿಸ್ಟರ್ ದಾಖಲಾತಿಯಲ್ಲಿ ನೋಂದಣಿಯಾಗಿರುವುದಿಲ್ಲವೆಂದು ಕಂಡು ಬರುತ್ತದೆ. ಈಗ ಅರ್ಜಿದಾರರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆಯುವ ಸಲುವಾಗಿ ಜನನ ಪ್ರಮಾಣ ಪತ್ರವು ಅತೀ ಅವಶ್ಯಕವಾಗಿ ಬೇಕಾಗಿರುತ್ತದೆ ಎಂಬುದಾಗಿ ಅರ್ಜಿಯಲ್ಲಿ ಸ್ಪಷ್ಟವಾಗಿ ನಮೂದಿಸಿರುತ್ತಾರೆ. ಒಂದು ವೇಳೆ ಈ ಅರ್ಜಿಯನ್ನು ಪುರಸ್ಕರಿಸದೇ ಇದ್ದಲ್ಲಿ, ಅರ್ಜಿದಾರರಿಗೆ ತುಂಬಲಾರದ ನಷ್ಟ ಉಂಟಾಗುತ್ತದೆ ಎಂಬ ಅಭಿಪ್ರಾಯವನ್ನು ಮಾನ್ಯ ನ್ಯಾಯಾಲಯವು ವ್ಯಕ್ತಪಡಿಸುತ್ತದೆ. ಒಂದಾನುವೇಳೆ ಈ ಅರ್ಜಿಯನ್ನು ಪುರಸ್ಕರಿಸಿದರೇ ಎದುರುದಾರರಿಗಾಗಲೀ ಅಥವಾ ಇತರರಿಗಾಗಲೀ ಯಾವುದೇ ರೀತಿಯ ನಷ್ಟ ಉಂಟಾಗಲಾರದೆಂದು ಅಭಿಪ್ರಾಯಪಟ್ಟು ಅರ್ಜಿದಾರರು ತಮ್ಮ ಅರ್ಜಿಯಲ್ಲಿ ಕೇಳಿರುವ ಪರಿಹಾರವನ್ನು ಪಡೆಯಲು ಅರ್ಹರಿರುತ್ತಾರೆಂಬ ತೀರ್ಮಾನಕ್ಕೆ ಈ ನ್ಯಾಯಾಲಯವು ಬಂದಿರುತ್ತದೆ. **ಆದ್ದರಿಂದ, ಅಂಶ ಸಂಖ್ಯೆ 1 ನ್ನು ಸಕಾರಾತ್ಮಕವಾಗಿ ಉತ್ತರಿಸಲಾಗಿದೆ.**

9. **ಅಂಶ ಸಂಖ್ಯೆ 2**:– ಅಂಶ ಸಂಖ್ಯೆ 1 ರಲ್ಲಿ ಚರ್ಚಿಸಿದ ಕಾರಣಗಳಿಂದಾಗಿ, ಈ ಕೆಳಕಂಡಂತೆ ಅಂತಿಮ ಆದೇಶ ಮಾಡಲಾಗಿದೆ.

**–:ಆದೇಶ:–**

ಅರ್ಜಿದಾರರು, ಜನನ ಮತ್ತು ಮರಣ ನೋಂದಣಿ ಕಾಯ್ದೆ–1969 ರ ಕಲಂ. 13(3) ರಡಿಯಲ್ಲಿ ಸಲ್ಲಿಸಿರುವ ಅರ್ಜಿಯನ್ನು ಪುರಸ್ಕರಿಸಲಾಗಿದೆ.

ಅರ್ಜಿದಾರರಾದ **ಜಸಿಂತಾ ಲೋರೆನ್ಸ ಪಿಂಟೊರವರು ದಿನಾಂಕ 17-08-1968 ರಂದು ಜನತಾಕಾಲೋನಿ, ಮಂಕಿ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿರುವ ಅವರ ಸ್ವಂತ ಮನೆಯಲ್ಲಿ** ಜನಿಸಿರುತ್ತಾರೆ ಎಂದು ತಮ್ಮ ಜನನ ಹಾಗೂ ಮರಣ ದಾಖಲಾತಿಯಲ್ಲಿ ನೋಂದಾಯಿಸಿಕೊಳ್ಳುವಂತೆ ಎದುರುದಾರರಿಗೆ ಆದೇಶಿಸಲಾಗಿದೆ.

ಅರ್ಜಿದಾರರಿಂದ ಅವಶ್ಯಕ ಶುಲ್ಕ ಪಡೆದು ಅವರ ಜನನ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶಿಸಲಾಗಿದೆ.

(ಈ ಆದೇಶವನ್ನು ಶೀಘ್ರಲಿಪಿಗಾರರಿಗೆ ಗಣಕಯಂತ್ರದಲ್ಲಿ ನೇರವಾಗಿ ಗಣಕೀಕೃತ ಮಾಡಿಸಿ, ನಂತರ ಅದನ್ನು ಓದಿ ತಪ್ಪುಗಳನ್ನು ತಿದ್ದಿದ ನಂತರ ತೆರೆದ ನ್ಯಾಯಾಲಯದಲ್ಲಿ ದಿನಾಂಕ 25-07-2026 ರಂದು ಘೋಷಿಸಲಾಯಿತು.)

ಸಹಿ ಇದೆ/-

**(ನವೀನ್ ಕೋಪರ್ಡೆ)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ., ಹೊನ್ನಾವರ.**

****

## -: **ಅನುಬಂಧ** :-

1. **ಅರ್ಜಿದಾರರ- ಪರ ವಿಚಾರಣೆ ಮಾಡಲ್ಪಟ್ಟ ಸಾಕ್ಷಿಃ-**

ಪಿ.ಡಬ್ಲ್ಯೂ-1 - ಜಸಿಂತಾ ಲೋರೆನ್ಸ ಪಿಂಟೊ

2. **ಅರ್ಜಿದಾರರ- ಪರ ಗುರುತಿಸಿಕೊಂಡಿರುವ ದಾಖಲಾತಿಗಳುಃ-**

| | | |
|---|---|---|
| ನಿಪಿ-1 | - | ಅಲಭ್ಯ ಪ್ರಮಾಣ ಪತ್ರ. |
| ನಿಪಿ-2 | - | ಅರ್ಜಿದಾರರ ಆಧಾರ್ ಕಾರ್ಡ್ ನ ಪ್ರತಿ. |
| ನಿಪಿ-3 | - | ಅರ್ಜಿದಾರರ ಶಾಲಾ ಧೃಡೀಕರಣ ಪತ್ರದ ಪ್ರತಿ. |
| ನಿಪಿ-4 | - | ಅರ್ಜಿದಾರರ ಹೋಲಿ ಕ್ರಾಸ್ ಮಂಕಿ ಚರ್ಚ್ ನವರು ನೀಡಿದ ಜನನ ಪ್ರಮಾಣ ಪತ್ರದ ದೃಢೀಕೃತ ಪ್ರತಿ |

3. <u>ಎದುರುದಾರರ– ಪರ ವಿಚಾರಣೆ ಮಾಡಲ್ಪಟ್ಟ ಸಾಕ್ಷಿಃ</u>–

–ಇಲ್ಲ–

4. <u>ಎದುರುದಾರರ– ಪರ ಗುರುತಿಸಿಕೊಂಡಿರುವ ದಾಖಲಾತಿಗಳುಃ</u>–

–ಇಲ್ಲ–

ಸಹಿ ಇದೆ/-

**(ನವೀನ್ ಕೋಪರ್ಡೆ)**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಜೆ.ಎಮ್.ಎಫ್.ಸಿ., ಹೊನ್ನಾವರ.**

****